# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 145 |
| ಸದಸ್ಯರ ಹೆಸರು | : | ಶ್ರೀ ಗೋವಿಂದರಾಜು (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 13.09.2022 |
| ಉತ್ತರಿಸುವ ಸಚಿವರು | : | ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ , ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಅಂಗನವಾಡಿ ಕೇಂದ್ರಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ ರಾಷ್ಟ್ರೀಯ ಶಿಕ್ಷಣ ನೀತಿ (ಎನ್.ಇ.ಪಿ) ಪಠ್ಯಕ್ರಮ ಜಾರಿ ಮಾಡುತ್ತಿರುವುದು ನಿಜವೇ; | ಹೌದು.<br>ರಾಜ್ಯದ ಅಂಗನವಾಡಿ ಕೇಂದ್ರಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ ರಾಷ್ಟ್ರೀಯ ಶಿಕ್ಷಣ ನೀತಿ (ಎನ್.ಇ.ಪಿ) ಪಠ್ಯಕ್ರಮ ಜಾರಿ ಮಾಡಲಾಗುತ್ತಿದೆ. |
| ಆ) | ಹಾಗಿದ್ದಲ್ಲಿ ಇದರ ಬೋದನೆಯನ್ನು ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕಾರ್ಯಕರ್ತೆಯರಿಂದ ಮಾಡಿಸಲು ಸಾಧ್ಯವೇ; | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ರಾಷ್ಟ್ರೀಯ ಶಿಕ್ಷಣ ನೀತಿ ಮಾರ್ಗಸೂಚಿಯನ್ವಯ, ಶಾಲಾ ಪೂರ್ವ ಶಿಕ್ಷಣಕ್ಕಾಗಿ ಈಗಾಗಲೇ 6 ಸಮಿತಿಗಳನ್ನು ರಚಿಸಲಾಗಿರುತ್ತದೆ. ಈ ಸಮಿತಿಗಳು ನೀಡುವ ಶಿಫಾರಸ್ಸಿನಂತೆ ಒಂದು ಪಠ್ಯಕ್ರಮವನ್ನು ರಚಿಸಲಾಗುವುದು. ಸದರಿ ಪಠ್ಯಕ್ರಮದ ಅನುಸಾರ ಅಂಗನವಾಡಿ ಕಾರ್ಯಕರ್ತೆಯರಿಗೆ ಕೈಪಿಡಿಗಳನ್ನು ತಯಾರಿಸಿ ಒದಗಿಸಲಾಗುವುದು. ಅದರ ಆಧಾರದ ಮೇಲೆ ಅಂಗನವಾಡಿ ಕಾರ್ಯಕರ್ತೆಯರಿಗೆ ಹಂತ ಹಂತವಾಗಿ ತರಬೇತಿ ನೀಡಿ ಈ ವರ್ಷದಲ್ಲಿ ಇಪ್ಪತ್ತು ಸಾವಿರ ಅಂಗನವಾಡಿಗಳಲ್ಲಿ ಹೊಸ ರಾಷ್ಟ್ರೀಯ ಶಿಕ್ಷಣ ನೀತಿ ಶಾಲಾ ಪೂರ್ವ ಶಿಕ್ಷಣವನ್ನು ಚಾಲ್ತಿಗೊಳಿಸಲು ಯೋಜಿಸಲಾಗಿದೆ. ತದನಂತರ, ಅವಶ್ಯವಿದ್ದಲ್ಲಿ, ರಾಷ್ಟ್ರೀಯ ಶಿಕ್ಷಣ ನೀತಿ ಮಾರ್ಗಸೂಚಿಯಂತೆ ಅಂಗನವಾಡಿ ಕಾರ್ಯಕರ್ತೆಯರಿಗೆ 6 ತಿಂಗಳಿನಿಂದ 1 ವರ್ಷದವರೆಗಿನ ಡಿಪ್ಲೊಮಾ ತರಬೇತಿ ನೀಡಲಾಗುವುದು. |
| ಇ) | ಎನ್.ಇ.ಪಿ ಪಠ್ಯಕ್ರಮವನ್ನು ಭೋದನೆ ಮಾಡಲು ಹೊಸದಾಗಿ ಶಿಕ್ಷಕರನ್ನು ಅಂಗನವಾಡಿ ಕೇಂದ್ರಗಳಿಗೆ ನೇಮಕ ಮಾಡಿಕೊಳ್ಳಲಾಗುವುದೇ; | ರಾಷ್ಟ್ರೀಯ ಶಿಕ್ಷಣ ನೀತಿ (ಎನ್.ಇ.ಪಿ) ಪಠ್ಯಕ್ರಮವನ್ನು ಬೋಧನೆ ಮಾಡಲು ಹೊಸದಾಗಿ ಶಿಕ್ಷಕರನ್ನು ಅಂಗನವಾಡಿ ಕೇಂದ್ರಗಳಿಗೆ ನೇಮಕ ಮಾಡಿಕೊಳ್ಳುವುದಿಲ್ಲ. |
| ಈ) | ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಕಾರ್ಯಕರ್ತೆ (ಶಿಕ್ಷಕಿ)ಗೆ ವಿಶೇಷವಾದ ತರಬೇತಿಯನ್ನು ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು; | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ರಾಷ್ಟ್ರೀಯ ಶಿಕ್ಷಣ ನೀತಿ ಮಾರ್ಗಸೂಚಿಯನ್ವಯ, ಶಾಲಾ ಪೂರ್ವ ಶಿಕ್ಷಣಕ್ಕಾಗಿ ಈಗಾಗಲೇ 6 ಸಮಿತಿಗಳನ್ನು ರಚಿಸಲಾಗಿರುತ್ತದೆ. ಈ ಸಮಿತಿಗಳು ನೀಡುವ ಶಿಫಾರಸ್ಸಿನಂತೆ ಒಂದು ಪಠ್ಯಕ್ರಮವನ್ನು ರಚಿಸಲಾಗುವುದು. ಸದರಿ ಪಠ್ಯಕ್ರಮದ ಅನುಸಾರ ಅಂಗನವಾಡಿ ಕಾರ್ಯಕರ್ತೆಯರಿಗೆ ಕೈಪಿಡಿಗಳನ್ನು ತಯಾರಿಸಿ ಒದಗಿಸಲಾಗುವುದು. ಅದರ ಆಧಾರದ ಮೇಲ ಅಂಗನವಾಡಿ ಕಾರ್ಯಕರ್ತೆಯರಿಗೆ ಹಂತ ಹಂತವಾಗಿ. |

| | | |
|---|---|---|
| | | ತರಬೇತಿ ನೀಡಿ ಈ ವರ್ಷದಲ್ಲಿ ಇಪ್ಪತ್ತು ಸಾವಿರ ಅಂಗನವಾಡಿಗಳಲ್ಲಿ ಹೊಸಾ ರಾಷ್ಟ್ರೀಯ ಶಿಕ್ಷಣ ನೀತಿ ಶಾಲಾ ಪೂರ್ವ ಶಿಕ್ಷಣವನ್ನು ಚಾಲ್ತಿಗೊಳಿಸಲು ಯೋಜಿಸಲಾಗಿದೆ. ತದನಂತರ, ಅವಶ್ಯವಿದ್ದಲ್ಲಿ, ರಾಷ್ಟ್ರೀಯ ಶಿಕ್ಷಣ ನೀತಿ ಮಾರ್ಗಸೂಚಿಯಂತೆ ಅಂಗನವಾಡಿ ಕಾರ್ಯಕರ್ತೆಯರಿಗೆ 6 ತಿಂಗಳಿನಿಂದ 1 ವರ್ಷದವರೆಗಿನ ಡಿಪ್ಲೊಮಾ ತರಬೇತಿ ನೀಡಲಾಗುವುದು |
| ಉ) | ರಾಜ್ಯದಲ್ಲಿ ಪ್ರಸ್ತುತ 66 ಸಾವಿರಕ್ಕೂ ಅಧಿಕವಾದ ಅಂಗನವಾಡಿ ಕೇಂದ್ರಗಳಿದ್ದು, ಆ ಎಲ್ಲಾ ಕೇಂದ್ರಕ್ಕೂ ಶಿಕ್ಷಕಿಯರನ್ನು ನೇಮಕ ಮಾಡುಕೊಳ್ಳಲಾಗುವುದೇ; ನೇಮಕವಾದಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕಿಯರ ಪರಿಸ್ಥಿತಿ ಏನು? | ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕಾರ್ಯಕರ್ತೆಯರಿಗೆ ತರಬೇತಿ ನೀಡುವ ಮುಖಾಂತರ ರಾಷ್ಟ್ರೀಯ ಶಿಕ್ಷಣ ನೀತಿ (NEP) ಯನ್ನು ಜಾರಿಗೆ ತರಲು ಉದ್ದೇಶಿಸಲಾಗಿರುವುದರಿಂದ ಶಿಕ್ಷಕಿಯರನ್ನು ನೇಮಕ ಮಾಡಿಕೊಳ್ಳುವ ಪ್ರಶ್ನೆ ಉದ್ಭವಿಸುವುದಿಲ್ಲ. |

**ಸಂಖ್ಯೆ:ಮಮಇ 266 ಐಸಿಡಿ 2022**

Halappa BA

**(ಆಚಾರ ಹಾಲಪ್ಪ ಬಸಪ್ಪ)**
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು
ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ
ಹಿರಿಯ ನಾಗರೀಕರ ಸಬಲೀಕರಣ ಸಚಿವರು.